ನಿ-72-(5)

ಮಾನ್ಯ ವಿಧಾನ ಪರಿಷತ್ತಿನ ಸದಸ್ಯರುಗಳಾದ ಶ್ರೀ ಕೆ.ಟಿ.ಶ್ರೀಕಂಠೇಗೌಡ, ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ, ಶ್ರೀ ಮರಿತಿಬ್ಬೇಗೌಡ, ಶ್ರೀ ಅರುಣ ಶಹಾಪೂರ ಹಾಗೂ ಡಾ. ವೈ.ಎ. ನಾರಾಯಣಸ್ವಾಮಿ ಇವರುಗಳಿಂದ ನಿಯಮ 72ರ ಅಡಿಯಲ್ಲಿ ನೀಡಿರುವ ಸೂಚನಾ ಪತ್ರಕ್ಕೆ ಉತ್ತರ.

**ವಿಷಯ:-**

ವೃತ್ತಿ ಶಿಕ್ಷಣ (ಜೆ.ಓ.ಸಿ) ಇಲಾಖೆಯಿಂದ ಕಳೆದ 20-25 ವರ್ಷಗಳ ಸೇವೆ ಸಲ್ಲಿಸಿದ ಶಿಕ್ಷಕರನ್ನು ದಿನಾಂಕ:06.04.2011ರ ವಿಶೇಷ ವಿಧೇಯಕದ ಅನ್ವಯ ವಿವಿಧ ಇಲಾಖೆಗಳಲ್ಲಿ ಸೇವಾ ವಿಲೀನಗೊಳಿಸಲಾಗಿದೆ. ಆದರೆ ವಿಧೇಯಕದಲ್ಲಿ ಖಾಯಂಪೂರ್ಣ ಸೇವೆಯನ್ನು ಪರಿಗಣಿಸಿರುವುದಿಲ್ಲ. ಇದರಿಂದ ಶಿಕ್ಷಕರಿಗೆ ನಿವೃತ್ತಿಯ ನಂತರ ಯಾವುದೇ ಪಿಂಚಣಿ ದೊರೆಯುವುದಿಲ್ಲ. ಈಗಾಗಲೇ, ಕೆಲವರು ನಿವೃತ್ತಿ, ಕೆಲವರು ಮರಣ ಹೊಂದಿದ್ದು, ಹಲವರು ನಿವೃತ್ತಿಯ ಅಂಚಿನಲ್ಲಿದ್ದಾರೆ. ಆದುದರಿಂದ, ಸೇವಾ ವಿಲೀನ ವಿಧೇಯಕ ತಿದ್ದುಪಡಿಗೊಳಿಸಿ ಇವರ ಖಾಯಂಪೂರ್ವ ಸೇವೆಯನ್ನು ಪರಿಗಣಿಸಿ, ನಿಶ್ಚಿತ ಪಿಂಚಣಿ ನೀಡುವ ಬಗ್ಗೆ ಪ್ರಸ್ತಾಪಿಸಿರುವ ಕುರಿತು.

**ಉತ್ತರ:-**

ಕರ್ನಾಟಕ ರಾಜ್ಯದಲ್ಲಿನ ಪದವಿ ಪೂರ್ವ ಶಿಕ್ಷಣದಲ್ಲಿರುವ ವೃತ್ತಿ ಆಧಾರಿತ ಕೋರ್ಸುಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಅರೆಕಾಲಿಕ ವೃತ್ತಿ ಆಧಾರಿತ ಕೋರ್ಸುಗಳ ನೌಕರರುಗಳನ್ನು ವಿಲೀನಗೊಳಿಸುವ ಅಧಿನಿಯಮ 2011, ಅಧಿಸೂಚನೆ ಸಂಖ್ಯೆ:ಸಂವ್ಯಶಾಇ 22:ಶಾಸನ 2011: ದಿನಾಂಕ:06.04.2011ರಂದು ಜಾರಿಗೆ ಬಂದಿದ್ದು, ಈ ವಿಧೇಯಕದಲ್ಲಿ ವಿಧಿಸಿರುವ ಷರತ್ತುಗಳ ಆಧಾರದ ಮೇಲೆ, ವೃತ್ತಿ ಶಿಕ್ಷಣ ಇಲಾಖೆಯಲ್ಲಿ ಉಪನ್ಯಾಸಕರಾಗಿ ಕರ್ತವ್ಯ ನಿರ್ವಹಿಸುತ್ತಿದ್ದ ಉಪನ್ಯಾಸಕರನ್ನು ವಿಲೀನ ವಿಧೇಯಕದನ್ವಯ ದಿನಾಂಕ:06.04.2011ಕ್ಕೆ ನಿರಂತರವಾಗಿ 05 ವರ್ಷಗಳ ಸೇವೆ ಸಲ್ಲಿಸಿರುವವರನ್ನು ವಿವಿಧ ಇಲಾಖೆಗಳಲ್ಲಿ ವಿಲೀನಗೊಳಿಸಲಾಗಿದೆ. ವಿಲೀನಗೊಂಡ ಅರೆಕಾಲಿಕ ವೃತ್ತಿ ಆಧಾರಿತ ಕೋರ್ಸುಗಳ ನೌಕರನು ಕರ್ತವ್ಯಕ್ಕೆ ಹಾಜರಾದ ನಂತರ, ಈ ಅಧಿನಿಯಮದ ಅಡಿಯಲ್ಲಿ ಆತನ ಪ್ರಾರಂಭಿಕ ಮೂಲ ವೇತನವನ್ನು, ಆತನು ವಿಲೀನಗೊಂಡ ಹುದ್ದೆಯ ಪ್ರವರ್ಗದ ಕಾಲಿಕ ವೇತನ ಶ್ರೇಣಿಯ ಕನಿಷ್ಠಕ್ಕೆ ನಿಗಧಿಗೊಳಿಸತಕ್ಕದ್ದು ಹಾಗೂ ತನ್ನ ವಿಲೀನಕ್ಕೆ ಮೊದಲು ಸಲ್ಲಿಸಿದ ಸೇವೆಯನ್ನು ವೇತನ,ಜೇಷ್ಠತೆ ಹಾಗೂ ರಜೆ ಅಥವಾ ಪಿಂಚಣಿಗೆ ಸಂಬಂಧಿಸಿದಂತೆ ಲೆಕ್ಕಕ್ಕೆ ತೆಗದುಕೊಳ್ಳತಕ್ಕದಲ್ಲವೆಂಬ ಷರತ್ತು ವಿಧಿಸಲಾಗಿದೆ. ಅಲ್ಲದೆ, ಕರ್ನಾಟಕ ಅರೆಕಾಲಿಕ ವೃತ್ತಿ ಆಧಾರಿತ ಕೋರ್ಸುಗಳ ನೌಕರರುಗಳನ್ನು ವಿಲೀನಗೊಳಿಸುವ ಅಧಿನಿಯಮ 2011ರ ನಿಯಮ-3ರಲ್ಲಿ ಅರೆಕಾಲಿಕ ವೃತ್ತಿ ಆಧಾರಿತ ಕೋರ್ಸ್‌ಗಳ ನೌಕರನನ್ನು ಒಂದು ಸಲದ ಕ್ರಮವಾಗಿ ವಿಲೀನಗೊಳಿಸಲು ಪರಿಗಣಿಸಿರುವುದರಿಂದ, ಸೇವಾ ವಿಲೀನ ವಿಧೇಯಕ ತಿದ್ದುಪಡಿ ಮಾಡಲು ಹಾಗೂ ಸದರಿ ನೌಕರರ ಖಾಯಂ ಪೂರ್ವ ಸೇವೆಯನ್ನು ಪರಿಗಣಿಸಿ, ನಿಶ್ಚಿತ ಪಿಂಚಣಿ ನೀಡಲು ಅವಕಾಶವಿರುವುದಿಲ್ಲ.

**ಸಂಖ್ಯೆ: ಇಪಿ 24 ಟಿವಿಇ 2020**

**(ಎಸ್.ಸುರೇಶ್ ಕುಮಾರ್)**
ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ
ಸಕಾಲ ಸಚಿವರು